ಕರ್ನಾಟಕ ಸರ್ಕಾರ

ಸಂಖ್ಯೆ: ಗ್ರಾಅಪ/40/ಗ್ರಾಪಂಅ/2018

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿ ಕಟ್ಟಡ,
ಬೆಂಗಳೂರು, ದಿನಾಂಕ: 17-10-2018.

**ಇವರಿಂದ:**

ಸರ್ಕಾರದ ಪ್ರಧಾನ ಕಾರ್ಯದರ್ಶಿ(ಪಂ.ರಾಜ್)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ,
ಬೆಂಗಳೂರು.

**ಇವರಿಗೆ:**

ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು,
ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯತಿ,

ಮಾನ್ಯರೆ,

**ವಿಷಯ:** ಮಾನ್ಯ ಕರ್ನಾಟಕ ಉಚ್ಚ ನ್ಯಾಯಾಲಯ ರಿಟ್ ಅಪೀಲ್ ಸಂಖ್ಯೆ: 844/2018 ರಲ್ಲಿ ನೀಡಿರುವ ತೀರ್ಪಿನಂತೆ ಕ್ರಮ ಜರುಗಿಸುವ ಬಗ್ಗೆ.

**ಉಲ್ಲೇಖ:**
1. ರಿಟ್ ಅರ್ಜಿ ಸಂಖ್ಯೆ: 1935/2018 ಮತ್ತು ಇತರೆ ಸಂಬಂಧಿಸಿದ ಪ್ರಕರಣಗಳಲ್ಲಿ ಮಾನ್ಯ ಕರ್ನಾಟಕ ರಾಜ್ಯ ಉಚ್ಚ ನ್ಯಾಯಾಲಯದ ಏಕ ಸದಸ್ಯ ಪೀಠವು ದಿನಾಂಕ: 28.02.2018 ರಂದು ನೀಡಿರುವ ತೀರ್ಪು
2. ರಿಟ್ ಅಪೀಲ್ ಸಂಖ್ಯೆ: 844/2018 ಮತ್ತು ಇತರೆ ಸಂಬಂಧಿಸಿದ ಪ್ರಕರಣಗಳಲ್ಲಿ ಮಾನ್ಯ ಉಚ್ಚ ನ್ಯಾಯಾಲಯದ ವಿಭಾಗೀಯ ಪೀಠ ದಿನಾಂಕ: 12.10.2018 ರಂದು ನೀಡಿರುವ ತೀರ್ಪು.

*****

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ರಾಜ್ಯದ ಹಲವಾರು ಗ್ರಾಮ ಪಂಚಾಯತಿಗಳಲ್ಲಿ ಗ್ರಾಮ ಪಂಚಾಯತಿ ಅಧ್ಯಕ್ಷರ/ಉಪಾಧ್ಯಕ್ಷರುಗಳ ವಿರುದ್ಧ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂ.ರಾಜ್ ಕಾಯ್ದೆ-1993 ರ ಕಲಂ 49 ರನ್ವಯ ಅವಿಶ್ವಾಸ ಗೊತ್ತುವಳಿಯನ್ನು ಮಂಡಿಸಿದ್ದು ಸದರಿ ಅವಿಶ್ವಾಸ ನಿರ್ಣಯದ ವಿರುದ್ಧ ಹಲವು ಗ್ರಾಮ ಪಂಚಾಯತಿ ಅಧ್ಯಕ್ಷರು/ಉಪಧ್ಯಕ್ಷರುಗಳು ಮಾನ್ಯ ಉಚ್ಚ ನ್ಯಾಯಾಲಯದ ವಿವಿಧ ಪೀಠಗಳ ಮುಂದೆ ರಿಟ್ ಅರ್ಜಿಗಳನ್ನು ದಾಖಲಿಸಿರುತ್ತಾರೆ. ಈ ಪ್ರಕರಣಗಳಲ್ಲಿ ವಿಚಾರಣೆ ನಡೆಸಿದ ಉಚ್ಚನ್ಯಾಯಾಲಯದ ಏಕ ಸದಸ್ಯ ಪೀಠವು ಉಲ್ಲೇಖ (1) ರ ಪ್ರಕರಣದಲ್ಲಿ ದಿನಾಂಕ: 28.02.2018 ರಂದು ಆದೇಶ ನೀಡಿರುತ್ತದೆ. ಈ ಆದೇಶದ ವಿರುದ್ಧ ಬಾದಿತರಾದ ಕೆಲವು ಚುನಾಯಿತ ಸದಸ್ಯರುಗಳು ಮಾನ್ಯ ಉಚ್ಚ ನ್ಯಾಯಾಲಯದ ವಿಭಾಗೀಯ ಪೀಠದ ಮುಂದೆ ರಿಟ್ ಅಪೀಲ್ ಸಲ್ಲಿಸಿರುತ್ತಾರೆ. ರಿಟ್ ಅಪೀಲ್‌ಗಳನ್ನು ವಿಚಾರಣೆ ನಡೆಸಿದ ವಿಭಾಗೀಯ ಪೀಠವು ಉಲ್ಲೇಖ (2) ರಿಟ್ ಅಪೀಲ್‌ಗಳಲ್ಲಿ ದಿನಾಂಕ: 12-10-2018 ರಂದು ಅಂತಿಮ ತೀರ್ಪು ನೀಡಿರುತ್ತದೆ. ಮಾನ್ಯ ಏಕಸದಸ್ಯ ಪೀಠ ಹಾಗೂ ಮಾನ್ಯ ವಿಭಾಗೀಯ ಪೀಠವು ನೀಡಿರುವ ಅಂತಿಮ ತೀರ್ಪನ್ನು ಸೂಕ್ತ ಕ್ರಮಕ್ಕಾಗಿ ಇದರೊಂದಿಗೆ ಲಗತ್ತಿಸಿ ತಮಗೆ ಕಳುಹಿಸಲು ನಾನು ನಿರ್ದೇಶಿಸಲ್ಪಟ್ಟಿದ್ದೇನೆ

ತಮ್ಮ ನಂಬುಗೆಯ,

17/10/18

(ಎಂ.ಕೆ.ಕೆಂಪೇಗೌಡ)
ನಿರ್ದೇಶಕರು (ಪಂ.ರಾಜ್-1) ಹಾಗೂ
ಪದನಿಮಿತ್ತ ಸರ್ಕಾರದ ಜಂಟಿ ಕಾರ್ಯದರ್ಶಿ
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ

**ಪ್ರತಿಗಳನ್ನು ಮುಂದಿನ ಸೂಕ್ತ ಕ್ರಮಕ್ಕಾಗಿ:**

1. ರಾಜ್ಯದ ಎಲ್ಲಾ ಜಿಲ್ಲಾಧಿಕಾರಿಗಳಿಗೆ,
2. ರಾಜ್ಯದ ಎಲ್ಲಾ ಉಪವಿಭಾಗಾಧಿಕಾರಿಗಳಿಗೆ,
3. ರಾಜ್ಯದ ಎಲ್ಲಾ ಕಾರ್ಯನಿರ್ವಾಹಕ ಅಧಿಕಾರಿಗಳಿಗ,
4. ಸಂಬಂಧಿಸಿದ ಗ್ರಾಮ ಪಂಚಾಯತಿಗಳ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳಿಗೆ.